# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು

ಸಂಖ್ಯೆ: ಸಿಎಸ್1/ಎಸ್.ಎಸ್.ಎಲ್.ಸಿ/ಮಾರ್ಚ್–2023/01/2022-23 ದಿನಾಂಕ: 28 -09-2022

**–ಸುತ್ತೋಲೆ –**

ವಿಷಯ: ಮಾರ್ಚ್–2023ರ ಎಸ್.ಎಸ್.ಎಲ್.ಸಿ ಮುಖ್ಯ ಪರೀಕ್ಷೆಗೆ ವಿದ್ಯಾರ್ಥಿಗಳ ನೋಂದಣಿ ಮಾಹಿತಿಗಳನ್ನು ಮಂಡಳಿಯ ಜಾಲತಾಣದ ಶಾಲಾ ಲಾಗಿನ್‌ನಲ್ಲಿ ಅಪ್‌ಲೋಡ್ ಮಾಡುವ ಬಗ್ಗೆ.

ಉಲ್ಲೇಖ: ಮಂಡಳಿಯ ಅಧಿಸೂಚನೆ ಸಂಖ್ಯೆ:ಎ8/ಎಸ್.ಎಸ್.ಎಲ್.ಸಿ.ಅಧಿಸೂಚನೆ /ಮಾರ್ಚ್–23/14/2022–23 ದಿನಾಂಕ: 17–09–2022

*******

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ವತಿಯಿಂದ ನಡೆಸಲಾಗುವ ಮಾರ್ಚ್–2023ರ ಎಸ್.ಎಸ್.ಎಲ್.ಸಿ. ಮುಖ್ಯ ಪರೀಕ್ಷೆಗೆ ಅರ್ಹ ಅಭ್ಯರ್ಥಿಗಳ ನೋಂದಣಿ ಮಾಹಿತಿಗಳನ್ನು ಮಂಡಳಿಯ ಜಾಲತಾಣದ (**https://sslc.karnataka.gov.in/**) ಶಾಲಾ ಲಾಗಿನ್‌ನಲ್ಲಿ ಪಡೆಯಲು ಯೋಜಿಸಲಾಗಿದೆ. ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಮಾನ್ಯತೆ ಪಡೆದಿರುವ ಖಾಸಗಿ ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳ ಮುಖ್ಯಸ್ಥರು ತಮ್ಮ ಶಾಲೆಯ (ಶಾಲಾ ಅಭ್ಯರ್ಥಿ, ಖಾಸಗಿ ಅಭ್ಯರ್ಥಿ, ಪುನರಾವರ್ತಿತ ಶಾಲಾ ಹಾಗೂ ಖಾಸಗಿ ಅಭ್ಯರ್ಥಿಗಳು) ಮಾರ್ಚ್–2023ರ ಎಸ್.ಎಸ್.ಎಲ್.ಸಿ. ಪರೀಕ್ಷೆಯನ್ನು ತೆಗೆದುಕೊಳ್ಳುವ ವಿದ್ಯಾರ್ಥಿಗಳ ವಿವರಗಳನ್ನು ಆನ್‌ಲೈನ್ ಮೂಲಕ ಅಪ್‌ಲೋಡ್ ಮಾಡುವಂತೆ ಈ ಮೂಲಕ ಆದೇಶಿಸಿದೆ.

1) ಈ ನೋಂದಣಿ ಕಾರ್ಯಕ್ಕೆ ದಿನಾಂಕ: **28-09-2022** ರಿಂದ **21-10-2022** ರವರೆಗೆ ಮಾಹಿತಿಯನ್ನು **ಅಪ್‌ಲೋಡ್** ಮಾಡಲು ಕಾಲಾವಧಿಯನ್ನು ನಿಗದಿಪಡಿಸಲಾಗಿದೆ.

2) ಮಾಹಿತಿಗಳನ್ನು ಅಪ್‌ಲೋಡ್ ಮಾಡಲು ಬಳಸಬೇಕಾದ ಫಾರಂನ್ನು ಮಂಡಳಿಯ ಜಾಲತಾಣ **https://sslc.karnataka.gov.in/** ರಲ್ಲಿನ ಶಾಲಾ ಲಾಗಿನ್ ಮೂಲಕ ತಲುಪಬಹುದಾಗಿದೆ.

3) ಮುಖ್ಯಶಿಕ್ಷಕರಿಗೆ **ಮಂಡಳಿಯ ಶಾಲಾ ಲಾಗಿನ್‌ನಲ್ಲಿ** ಮಂಡಳಿಯ ವತಿಯಿಂದ ಈಗಾಗಲೇ ನೀಡಿರುವ **Username and Password** ಬಳಸಿ ಆನ್‌ಲೈನ್‌ನಲ್ಲಿ ನೋಂದಣಿ ಕಾರ್ಯ ಮಾಡಬಹುದಾಗಿದೆ.

4) ಮಾರ್ಚ್–2023ರ ಪರೀಕ್ಷೆಗೆ ಈ ಕೆಳಕಂಡ ಅಭ್ಯರ್ಥಿಗಳನ್ನು ನೋಂದಾಯಿಸಬೇಕಾಗಿರುತ್ತದೆ.
   - ಶಾಲಾ ವಿದ್ಯಾರ್ಥಿಗಳ (CCERF) - ಪೂರ್ಣ ಮಾಹಿತಿ ಹಾಗೂ ಭಾವಚಿತ್ರ ಮತ್ತು ಸಹಿಯನ್ನು ಅಪ್‌ಲೋಡ್ ಮಾಡಬೇಕು.
   - ಖಾಸಗಿ ವಿದ್ಯಾರ್ಥಿಗಳ (CCEPF) - ಪೂರ್ಣ ಮಾಹಿತಿ ಹಾಗೂ ಭಾವಚಿತ್ರ ಮತ್ತು ಸಹಿಯನ್ನು ಅಪ್‌ಲೋಡ್ ಮಾಡಬೇಕು.
   - ಸೆಪ್ಟೆಂಬರ್–2020 ರಿಂದ ಜುಲೈ–2022 ರವರೆಗಿನ (CCERR /CCEPR) ಮತ್ತು ಏಪ್ರಿಲ್ 2003 ರಿಂದ ಜೂನ್ 2010 ರವರೆಗಿನ (NSR/NSPR) ಪುನರಾವರ್ತಿತ ಶಾಲಾ ಅಭ್ಯರ್ಥಿಗಳ ಹಾಗೂ ಪುನರಾವರ್ತಿತ ಖಾಸಗಿ ಅಭ್ಯರ್ಥಿಗಳ ನೋಂದಣಿ ಸಂಖ್ಯೆಯನ್ನು ನಮೂದಿಸಿದರೆ ಡೇಟಾ Auto Fetch ಆಗುತ್ತದೆ. ಪೋಷಕರ ಮೊಬೈಲ್ ಸಂಖ್ಯೆಯನ್ನು ನಮೂದಿಸಿ, ಭಾವಚಿತ್ರ ಮತ್ತು ಸಹಿಯನ್ನು ಅಪ್‌ಲೋಡ್ ಮಾಡಬೇಕು.

- **2002** ಮತ್ತು ಅದಕ್ಕಿಂತ ಹಿಂದಿನ ವರ್ಷಗಳಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಅನುತ್ತೀರ್ಣರಾದ NSR ಮತ್ತು NSPR ಪುನರಾವರ್ತಿತ ಅಭ್ಯರ್ಥಿಗಳ ವಿವರಗಳನ್ನು ಶಾಲೆಯಲ್ಲಿ ಲಭ್ಯವಿರುವ ಎಂ.ಎಸ್.ಎ. ಫಾರಂ ಬಳಸಿ (ಶಾಲೆಯಲ್ಲಿ ಲಭ್ಯವಿಲ್ಲದಿದ್ದಲ್ಲಿ ಸಂಬಂಧಿಸಿದ ವಿಭಾಗೀಯ ಕಛೇರಿಯಿಂದ ದ್ವಿತೀಯ ಪ್ರತಿ ಎಂ.ಎಸ್.ಎ.ಯನ್ನು ಪಡೆದು) ಪರೀಕ್ಷಾ ಶುಲ್ಕವನ್ನು ಮಂಡಳಿಯ NEFT Challan ಮೂಲಕ ಪಾವತಿಸಿ ಮೂಲ ಚಲನ್ ಪ್ರತಿ, ಎಂ.ಎಸ್.ಎ. ಮತ್ತು ನಾಮಿನಲ್ ರೋಲ್‌ನೊಂದಿಗೆ ಮಂಡಳಿಗೆ ದಿನಾಂಕ: **29-10-2022** ರೊಳಗೆ ಸಲ್ಲಿಸುವುದು.

5) **ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಸಂಬಂಧಿಸಿದಂತೆ ಶಾಲಾ ವಿದ್ಯಾರ್ಥಿಗಳ ಬಹುತೇಕ ಮಾಹಿತಿಗಳನ್ನು SATSನ ಡೇಟಾಬೇಸ್‌ನಿಂದ ಪಡೆಯುತ್ತಿರುವುದರಿಂದ ಅಭ್ಯರ್ಥಿಯ ಹೆಸರು, ತಂದೆಯ ಹೆಸರು, ತಾಯಿಯ ಹೆಸರು, ಜನ್ಮ ದಿನಾಂಕ, ಪ್ರವರ್ಗ, ಧರ್ಮ, ಲಿಂಗ ಮತ್ತು ಮಾಧ್ಯಮ ಇವುಗಳಲ್ಲಿ ಯಾವುದಾದರು ತಿದ್ದುಪಡಿ ಮಾಡಬೇಕಾದಲ್ಲಿ, ಮಂಡಳಿಯ ಜಾಲತಾಣದಲ್ಲಿ ನೇರವಾಗಿ ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ. ಮೊದಲು ಎಸ್.ಎ.ಟಿ.ಎಸ್ ಡೇಟಾಬೇಸ್‌ನಲ್ಲಿ ತಿದ್ದುಪಡಿ ಮಾಡಿ ನಂತರ ಮಂಡಳಿಯ ಶಾಲಾ ಲಾಗಿನ್‌ನಲ್ಲಿ ಪರೀಕ್ಷಾ ನೋಂದಣಿ ಫಾರಂ ಭರ್ತಿ ಮಾಡುವುದು.**

6) ಆನ್‌ಲೈನ್ ಡೇಟಾ ಎಂಟ್ರಿ ಪ್ರಾರಂಭಿಸುವ ಮೊದಲು ಶಾಲೆಯ ಪ್ರತಿ ವಿದ್ಯಾರ್ಥಿಯ ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಭಾವಚಿತ್ರ **(60-80kb)** ಹಾಗೂ ಸಹಿಯನ್ನು **(20-50kb) jpeg format** ನಲ್ಲಿ ಅವರ ಎಸ್.ಎ.ಟಿ.ಎಸ್. ನೋಂದಣಿ ಸಂಖ್ಯೆಯ ಅನುಕ್ರಮದಲ್ಲಿ ಸೇವ್ ಮಾಡಿಟ್ಟುಕೊಳ್ಳುವುದು.

   **ಉದಾ:-** ನಯನ ಎಂಬ ವಿದ್ಯಾರ್ಥಿನಿಯ SATS ಸಂಖ್ಯೆಯು 012345678 ಆಗಿದ್ದಲ್ಲಿ ಭಾವಚಿತ್ರವನ್ನು ಸ್ಕ್ಯಾನ್ ಮಾಡಿ P012345678 ಎಂದೂ, ಸಹಿಯನ್ನು ಸ್ಕ್ಯಾನ್ ಮಾಡಿ S012345678 ಎಂದು ಸೇವ್ ಮಾಡಿಟ್ಟುಕೊಳ್ಳುವುದು.

7) ವಿದ್ಯಾರ್ಥಿಗಳ ಮಾಹಿತಿಗಳನ್ನು ಆನ್‌ಲೈನ್‌ನಲ್ಲಿ ನೋಂದಾಯಿಸಿದ ನಂತರ ಪ್ರತಿ ವಿದ್ಯಾರ್ಥಿಯ ಮಾಹಿತಿಗಳನ್ನು ವೈಯಕ್ತಿಕವಾಗಿ ಮತ್ತು ಶಾಲೆಯ ಕ್ರೋಢೀಕೃತ ಮಾಹಿತಿಯನ್ನು ನಾಮಿನಲ್ ರೋಲ್‌ನ್ನು ಮುದ್ರಿಸಿಕೊಂಡು ಪರಿಶೀಲಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

8) ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿರುವ ವಿದ್ಯಾರ್ಥಿಗಳ **Aadhar linked** ಬ್ಯಾಂಕ್ ಖಾತೆಯ ವಿವರಗಳನ್ನು ನಮೂದಿಸುವುದು ಕಡ್ಡಾಯವಾಗಿರುತ್ತದೆ. ಹಿಂದುಳಿದ ವರ್ಗಕ್ಕೆ (OBC) ಸೇರಿದ ವಿದ್ಯಾರ್ಥಿಗಳು ಶುಲ್ಕ ವಿನಾಯಿತಿ ಪಡೆಯಬೇಕಾದಲ್ಲಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳ RD NUMBER ನ್ನು ನಮೂದಿಸುವುದು ಕಡ್ಡಾಯವಾಗಿರುತ್ತದೆ.

9) ಉಲ್ಲೇಖದಲ್ಲಿ ಆದೇಶಿಸಿರುವಂತೆ ಹೊಸ ಖಾಸಗಿ ಅಭ್ಯರ್ಥಿಗಳ ನೋಂದಣಿ ಶುಲ್ಕವನ್ನು (ರೂ.205/-) ಶಾಲಾ ಹಂತದಲ್ಲಿಯೇ ಸಂಗ್ರಹಿಸಬೇಕಾಗಿರುವುದರಿಂದ, ಈ ಶುಲ್ಕವನ್ನೂ ಸಹ ಪರೀಕ್ಷಾ ಶುಲ್ಕದ ಜೊತೆಯಲ್ಲಿಯೇ ಆನ್‌ಲೈನ್‌ನಲ್ಲಿಯೇ ಮಂಡಳಿಗೆ ಭರಿಸಲು ಚಲನ್ ಸೃಜಿಸಲಾಗುವುದು.

10) ಉಲ್ಲೇಖಿತ ಅಧಿಸೂಚನೆಯನ್ವಯ ಈ ಬಾರಿ ಪೂರ್ವಸಿದ್ಧತಾ ಪರೀಕ್ಷೆಯ ಶುಲ್ಕವನ್ನು ಕೈಬಿಡಲಾಗಿದೆ.

11) ಮುಖ್ಯ ಶಿಕ್ಷಕರು ಆನ್‌ಲೈನ್‌ನಲ್ಲಿ ಎಲ್ಲಾ ವಿದ್ಯಾರ್ಥಿಗಳ ಮಾಹಿತಿ ಗಣಕೀಕರಿಸಿದ ಮೇಲೆ ವಿದ್ಯಾರ್ಥಿಗಳ ಶುಲ್ಕವನ್ನು ಮಂಡಳಿಗೆ ಪಾವತಿಸಲು ನೋಂದಣಿಗೆ ನಿಗದಿಪಡಿಸಲಾದ ಕೊನೆಯ ದಿನಾಂಕದ ನಂತರ ಮಂಡಳಿಯ ಶಾಲಾ ಲಾಗಿನ್‌ನಲ್ಲಿ ಸೃಜಿಸಲಾಗುವ ಚಲನ್‌ನ್ನು ಬಳಸಿ **ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾದ (ಈ ಹಿಂದಿನ ಕಾರ್ಪೋರೇಷನ್ ಬ್ಯಾಂಕ್)** ರಾಜ್ಯದ ಯಾವುದೇ ಶಾಖೆಯಲ್ಲಿ ಪಾವತಿಸಿ, ಮೂಲ ಚಲನ್‌ನ್ನು ಮಂಡಳಿಗೆ ಸಲ್ಲಿಸುವುದು. **ಶಾಲಾ ಲಾಗಿನ್‌ನಲ್ಲಿ ಸೃಜಿಸಲಾಗುವ ಚಲನ್‌ನ್ನು ಬಳಸಿಯೇ ಪರೀಕ್ಷಾ ಶುಲ್ಕವನ್ನು ಪಾವತಿಸಬೇಕು. ನೆಫ್ಟ್ ಚಲನ್ ಬಳಸಿ ಶುಲ್ಕ ಪಾವತಿಸಬಾರದು, ಪಾವತಿಸಿದಲ್ಲಿ ಅಂತಹ ಶುಲ್ಕ ಪಾವತಿಯನ್ನು ಪರಿಗಣಿಸಲಾಗುವುದಿಲ್ಲ.**

12) ಪ್ರಸ್ತುತ ಆನ್‌ಲೈನ್ ಮೂಲಕ ಭರ್ತಿ ಮಾಡಲಾದ ವಿದ್ಯಾರ್ಥಿಗಳ ವಿವರಗಳು ಅಂಕಪಟ್ಟಿ ಹಾಗೂ ವರ್ಗಾವಣೆ ಪತ್ರಗಳಲ್ಲಿ ನಮೂದಾಗುವುದರಿಂದ ಯಾವುದೇ ತಪ್ಪುಗಳು ಆಗದಂತೆ ಎಚ್ಚರಿಕೆ ವಹಿಸಲು ಸೂಚಿಸಿದೆ. ನಿಗದಿತ ದಿನಾಂಕದ ನಂತರ ತಾವುಗಳು ನೀಡುವ ಮಾಹಿತಿಗಳನ್ನು ಫ್ರೀಜ್ ಮಾಡುವುದರಿಂದ ಅದರ ನಂತರ ವಿದ್ಯಾರ್ಥಿಗಳ ವಿವರಗಳಲ್ಲಿ ಯಾವುದೇ ಬದಲಾವಣೆ ಮಾಡಲು ಅವಕಾಶ ನೀಡಲಾಗುವುದಿಲ್ಲ.

13) ಸದರಿ ಪರೀಕ್ಷಾ ನೋಂದಣಿಗೆ ಸಂಬಂಧಿಸಿದಂತೆ ಯಾವುದೇ ಸಂದೇಹಗಳಿದ್ದಲ್ಲಿ Screenshot ಸಹಿತ User Manual ಹಾಗೂ FAQ ಗಳನ್ನು ಮಂಡಳಿಯ ಜಾಲತಾಣದ ಶಾಲಾ ಲಾಗಿನ್‌ನಲ್ಲಿ ಒದಗಿಸಲಾಗಿದ್ದು, ಅವುಗಳ ಸದುಪಯೋಗ ಪಡೆಯಬಹುದಾಗಿದೆ. ಅಲ್ಲದೇ ದಿನಾಂಕ: **28-09-2022** ರಿಂದ **21-10-2022** ರವರೆಗೆ ಕಛೇರಿ ಕೆಲಸದ ದಿನಗಳಂದು ಮುಖ್ಯಶಿಕ್ಷಕರು ಮಂಡಳಿಯ ಸಹಾಯವಾಣಿಯ **080-23310075, 080-23310076** ಸಂಖ್ಯೆಗಳಿಗೆ ಕರೆ ಮಾಡಿ ಪರೀಕ್ಷಾ ನೋಂದಣಿಗೆ ಸಂಬಂಧಿಸಿದ ಸಂದೇಹಗಳನ್ನು ಪರಿಹರಿಸಿಕೊಳ್ಳಬಹುದು.

**ಮಂಡಳಿಯ ವತಿಯಿಂದ ಮುಖ್ಯಶಿಕ್ಷಕರಿಗೆ ನೀಡಲಾಗಿರುವ Usernameಗೆ ಸಂಬಂಧಿಸಿದ Passwordನ್ನು ಗೌಪ್ಯವಾಗಿಟ್ಟುಕೊಳ್ಳುವುದು.**

(ಗೋಪಾಲಕೃಷ್ಣ ಹೆಚ್.ಎನ್.) 28/9/2022
ನಿರ್ದೇಶಕರು(ಪರೀಕ್ಷೆಗಳು)

ಅಗತ್ಯ ಕ್ರಮಕ್ಕಾಗಿ :

1) ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಇವರುಗಳಿಗೆ
2) ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ
3) ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಮಾನ್ಯತೆ ಪಡೆದಿರುವ ಖಾಸಗಿ ಅನುದಾನಿತ ಹಾಗೂ ಅನುದಾನರಹಿತ ಪ್ರೌಢಶಾಲೆಗಳ ಮುಖ್ಯಸ್ಥರಿಗೆ

ಪ್ರತಿಗಳನ್ನು :

1) ಮಾನ್ಯ ಮುಖ್ಯ ಕಾರ್ಯದರ್ಶಿಗಳು, ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ, ಬಹುಮಹಡಿಗಳ ಕಟ್ಟಡ, ಬೆಂಗಳೂರು
2) ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು
3) ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು
4) ಮಾನ್ಯ ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ
5) ಮಾನ್ಯ ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರ್ಗಿ
6) ನಿರ್ದೇಶಕರು, ಪ್ರೌಢ ಶಿಕ್ಷಣ, ಮಾನ್ಯ ಆಯುಕ್ತರ ಕಛೇರಿ
7) ವಿಭಾಗೀಯ ಸಹನಿರ್ದೇಶಕರು, ಬೆಂಗಳೂರು, ಮೈಸೂರು, ಬೆಳಗಾಂ ಹಾಗೂ ಕಲಬುರಗಿ ವಿಭಾಗಗಳು

ಇವರುಗಳಿಗೆ ಗೌರವಪೂರ್ವಕವಾಗಿ ಸಲ್ಲಿಸಿದೆ.